## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಕೆಂಗಲ್ ಹನುಮಂತಯ್ಯ ಹಾಸ್ಟಲ್ ಟ್ರಸ್ಟ್, ಇವರ ಸಾಂಸ್ಕೃತಿಕ ಹಾಗೂ ಗ್ರಂಥಾಲಯ ಕೇಂದ್ರದ ಅಭಿವೃದ್ಧಿಗೆ ಅನುದಾನ ನೀಡುವ ಬಗ್ಗೆ.

ಓದಲಾಗಿದೆ: ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ.ಡಿಕೆಸಿ-33011/150/2019, ದಿನಾಂಕ.19-12-2019.

ಪ್ರಸ್ತಾವನೆ:-

2019-20ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-200ರಲ್ಲಿ "ಶ್ರೀ ಕೆಂಗಲ್ ಹನುಮಂತಯ್ಯ ಹಾಸ್ಟಲ್ ಟ್ರಸ್ಟ್, ಬೆಂಗಳೂರು, ಇವರ ಸಾಂಸ್ಕೃತಿಕ ಹಾಗೂ ಗ್ರಂಥಾಲಯ ಕೇಂದ್ರದ ಅಭಿವೃದ್ಧಿಗೆ 5 ಕೋಟಿ ರೂ.ಗಳ ಅನುದಾನ ನೀಡಲಾಗುವುದು" ಎಂದು ಘೋಷಿಸಲಾಗಿದೆ.

ಶ್ರೀ ಕೆಂಗಲ್ ಹನುಮಂತಯ್ಯ ಹಾಸ್ಟಲ್ ಟ್ರಸ್ಟ್, ಬೆಂಗಳೂರು, ಇವರ ಸಾಂಸ್ಕೃತಿಕ ಹಾಗೂ ಗ್ರಂಥಾಲಯ ಕೇಂದ್ರದ ಅಭಿವೃದ್ಧಿ ಕಾಮಗಾರಿಗೆ ಸಂಬಂಧಿಸಿದಂತೆ, ಕಾರ್ಯಪಾಲಕ ಅಭಿಯಂತರರು, ಕೆಐಆರ್‌ಡಿಎಲ್, ಬೆಂಗಳೂರು ಇವರು ಸಲ್ಲಿಸಿರುವ ರೂ.500.00 ಲಕ್ಷಗಳ ಅಂದಾಜು ಪಟ್ಟಿ ಹಾಗೂ ನೀಲಿ ನಕ್ಷೆಗಳನ್ನು ಹಾಗೂ ಕಾರ್ಯದರ್ಶಿ, ಶ್ರೀ ಕೆಂಗಲ್ ಹನುಮಂತಯ್ಯ ಹಾಸ್ಟಲ್ ಟ್ರಸ್ಟ್, ಬೆಂಗಳೂರು ಇವರು ಸಲ್ಲಿಸಿರುವ ಮೂಲ ಟ್ರಸ್ಟಿನ್ ಡೀಡ್ ಮತ್ತು ಆದಾಯ ತೆರಿಗೆ ದಾಖಲೆಗಳನ್ನು ಸಲ್ಲಿಸುತ್ತಾ, ಸದರಿ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ರೂ.500.00ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಅಪರ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ, ಬೆಂಗಳೂರು, ಇವರು ಕೋರಿರುತ್ತಾರೆಂದು ಹಾಗೂ 2019-20ನೇ ಸಾಲಿನ ಕ್ರಿಯಾಯೋಜನೆಯ ಲೆಕ್ಕಶೀರ್ಷಿಕೆ 2205-00-104-4-01-100ರಡಿ ಶ್ರೀ ಕೆಂಗಲ್ ಹನುಮಂತಯ್ಯ ಹಾಸ್ಟಲ್ ಟ್ರಸ್ಟ್, ಇವರ ಸಾಂಸ್ಕೃತಿಕ ಹಾಗೂ ಗ್ರಂಥಾಲಯ ಕೇಂದ್ರದ ಅಭಿವೃದ್ಧಿಗೆ ರೂ.500.00 ಲಕ್ಷಗಳ ಅನುದಾನವನ್ನು ಕಲ್ಪಿಸಿದ್ದು, ಸದರಿ ಅಭಿವೃದ್ಧಿ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ರೂ.500.00 ಲಕ್ಷಗಳ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ, ಬೆಂಗಳೂರು ಇವರಿಗೆ ಬಿಡುಗಡೆ ಮಾಡುವಂತೆ ಕೋರಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರು ಮೇಲೆ ಓದಲಾದ ಪತ್ರದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕಸಂವಾ 215 ಕಸಧ 2019, ಬೆಂಗಳೂರು, ದಿನಾಂಕ.24-01-2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2019-20ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ.200 ರಲ್ಲಿ ಘೋಷಿಸಿರುವಂತೆ ಶ್ರೀ ಕೆಂಗಲ್ ಹನುಮಂತಯ್ಯ ಹಾಸ್ಟಲ್ ಟ್ರಸ್ಟ್,

..2..

ಬೆಂಗಳೂರು, ಇವರ ಸಾಂಸ್ಕೃತಿಕ ಹಾಗೂ ಗ್ರಂಥಾಲಯ ಕೇಂದ್ರದ ಅಭಿವೃದ್ಧಿ ಕಾಮಗಾರಿಯನ್ನು ರೂ.500.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿ, ಸದರಿ ಕಾಮಗಾರಿ ಕೈಗೊಳ್ಳಲು ರೂ.500.00 ಲಕ್ಷಗಳನ್ನು (ರೂಪಾಯಿ ಐನೂರು ಲಕ್ಷಗಳು ಮಾತ್ರ) ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ, ಬೆಂಗಳೂರು ಇವರಿಗೆ ಬಿಡುಗಡೆ ಮಾಡಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರಿಗೆ ಮಂಜೂರಾತಿ ನೀಡಿದೆ.

2. ಈ ವೆಚ್ಚವನ್ನು 2019–20ನೇ ಸಾಲಿನ ಲೆಕ್ಕಶೀರ್ಷಿಕೆ 2205–00–102–4–01–100 ಅಡಿಯಲ್ಲಿ ಭರಿಸತಕ್ಕದ್ದು.

3. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 21 ವೆಚ್ಚ–7/2020, ದಿನಾಂಕ.21–01–2020, ಮತ್ತು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ.ಯೋಇಸೆ/29/ಜಉವಿ/2019 ದಿನಾಂಕ.22–07–2019ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

24/1/20
(ಪಿ.ಎಸ್.ಮಾಲತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ.

ಗೆ:

1) ಮಹಾಲೇಖಪಾಲರು (ಎ&ಇ) ಕರ್ನಾಟಕ, ಬೆಂಗಳೂರು
2) ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ, ಬೆಂಗಳೂರು.
3) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು
4) ಖಜಾನಾಧಿಕಾರಿ, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
5) ನಿರ್ದೇಶಕರು (ಜನಶಕ್ತಿ ಮತ್ತು ಉದ್ಯೋಗ ವಿಭಾಗ), ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6) ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ–7) ವಿಧಾನಸೌಧ, ಬೆಂಗಳೂರು